# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **837**

ಸದಸ್ಯರ ಹೆಸರು : ಶ್ರೀ. ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : **19/08/2025**

ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ | ಪಟ್ಟಣ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; | ಪ್ರಸ್ತುತ ಸರ್ಕಾರದ ಪರಿಶೀಲನೆಯಲ್ಲಿರುವ, ಪಟ್ಟಣ ಪಂಚಾಯಿತಿಯಿಂದ ಪುರಸಭೆಯನ್ನು ರಚಿಸುವ ಪ್ರಸ್ತಾವನೆಗಳು:<br>a) ಬೀದರ್ ಜಿಲ್ಲೆಯ ಔರಾದ್(ಬಿ) ಪಟ್ಟಣ ಪಂಚಾಯಿತಿಯ ಪ್ರಸ್ತಾವನೆ<br>b) ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ಪಟ್ಟಣ ಪಂಚಾಯಿತಿಯ ಪ್ರಸ್ತಾವನೆ<br>c) ಧಾರವಾಡ ಜಿಲ್ಲೆಯ ಕುಂದಗೋಳ ಪಟ್ಟಣ ಪಂಚಾಯಿತಿಯ ಪ್ರಸ್ತಾವನೆ |
| ಆ | ಯಾವ ಯಾವ ಪಟ್ಟಣ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ (ವಿವರ ನೀಡುವುದು); | |
| ಇ | ಬೀಳಗಿ ಪಟ್ಟಣ ಪಂಚಾಯಿತಿಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಈ ಕುರಿತು ಸರ್ಕಾರದ ನಿಲುವೇನು? | ಬೀಳಗಿ ಪಟ್ಟಣ ಪಂಚಾಯಿತಿಯಿಂದ ಪುರಸಭೆಯನ್ನು ರಚಿಸುವುದಕ್ಕಾಗಿ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ಸರ್ಕಾರಕ್ಕೆ ಸಲ್ಲಿಸಿದ್ದ ಪ್ರಸ್ತಾವನೆಯನ್ನು ಪರಿಶೀಲಿಸಿ, ಆರ್ಥಿಕ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ & ಪಂಚಾಯತ್‌ರಾಜ್ ಇಲಾಖೆಗಳ ಸಹಮತಿಯನ್ನು ಕೋರಲಾಗಿತ್ತು. ಬೀಳಗಿ ಪಟ್ಟಣ ಪಂಚಾಯಿತಿಯಿಂದ ಪುರಸಭೆಯನ್ನು ರಚಿಸಲು ಈ ಎರಡು ಇಲಾಖೆಗಳೂ ಸಹಮತಿಸಿರುವುದಿಲ್ಲ. ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಸೆಕ್ಷನ್–3 ರಲ್ಲಿ ತಿಳಿಸಿರುವ ಮಾನದಂಡವನ್ನು ಪೂರೈಸದ ಕಾರಣ ಬೀಳಗಿ ಪಟ್ಟಣ ಪಂಚಾಯಿತಿಯಿಂದ ಪುರಸಭೆಯನ್ನು ರಚಿಸುವ ಪ್ರಸ್ತಾವನೆಯನ್ನು ಪರಿಶೀಲನೆಯಿಂದ ಕೈಬಿಡಲಾಗಿರುತ್ತದೆ. |

**ಸಂಖ್ಯೆ:ನಅಇ 35 ಎಲ್‌ಸಿಕ್ಯೂ 2025**

(ರಹೀಂ ಖಾನ್)

ಪೌರಾಡಳಿತ ಹಾಗೂ ಹಜ್ ಸಚಿವರು